# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

35

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 11-12-202

---

**ಅವಧಿ ಮುಗಿದ ನಗರ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ**

# ಸರ್ಕಾರಕ್ಕೆ ನಿರ್ದೇಶನ ನೀಡಲು ಮುಂದಾದ ಹೈಕೋರ್ಟ್

11/12/20

**ಬೆಂಗಳೂರು:** ಅವಧಿ ಮುಗಿದ ರಾಜ್ಯದ ಕೆಲ ನಗರ ಸ್ಥಳೀಯ ಸಂಸ್ಥೆಗಳಿಗೆ ಕಾಲಮಿತಿಯೊಳಗೆ ಚುನಾವಣೆ ನಡೆಸಲು ರಾಜ್ಯ ಸರ್ಕಾರ ಹಾಗೂ ರಾಜ್ಯ ಚುನಾವಣಾ ಆಯೋಗಕ್ಕೆ ಸೂಕ್ತ ನಿರ್ದೇಶನಗಳನ್ನು ನೀಡಲು ಹೈಕೋರ್ಟ್ ಸ್ವಯಂ ಮುಂದಾಗಿದೆ.

ಇದಕ್ಕಾಗಿ ಸ್ವಯಂಪ್ರೇರಿತ ಸಾರ್ವಜನಿಕ ಹಿತಾಸಕ್ತಿ ಅರ್ಜಿ ದಾಖಲಿಸಿಕೊಳ್ಳುವಂತೆ ಹೈಕೋರ್ಟ್ ರಿಜಿಸ್ಟ್ರಾರ್ ಜನರಲ್‌ಗೆ ನಿರ್ದೇಶನ ನೀಡಿರುವ ಮುಖ್ಯ ನ್ಯಾಯಮೂರ್ತಿ ಎ.ಎಸ್. ಓಕ್, ಅರ್ಜಿಯಲ್ಲಿ ರಾಜ್ಯ ಸರ್ಕಾರ ಹಾಗೂ ರಾಜ್ಯ ಚುನಾವಣಾ ಆಯೋಗವನ್ನು ಪ್ರತಿವಾದಿಯನ್ನಾಗಿ ಮಾಡಿ, ಅರ್ಜಿಯನ್ನು ಡಿ.17ರಂದು ವಿಚಾರಣೆಗೆ ತರುವಂತೆ ಸೂಚಿಸಿದೆ.

ವಿಜಯಪುರ ಮಹಾನಗರ ಪಾಲಿಕೆ ಚುನಾವಣೆ ಸಂಬಂಧ ಮುಖ್ಯ ನ್ಯಾಯಮೂರ್ತಿ ನೇತೃತ್ವದ ವಿಭಾಗೀಯ ನ್ಯಾಯಪೀಠ ತೀರ್ಪು ನೀಡಿದ ಬಳಿಕ, ಚುನಾವಣಾ ಆಯೋಗದ ವಕೀಲ ಕೆ.ಎನ್. ಫಣೀಂದ್ರ ಅವರು, ವಿಜಯಪುರ ಮಹಾನಗರ ಪಾಲಿಕೆಯ ಮೀಸಲಾತಿ, ವಾರ್ಡ್ ಮರುವಿಂಗಡಣೆ ಬಗ್ಗೆ ಕಲಬುರಗಿ ಹೈಕೋರ್ಟ್ ಪೀಠ ನೀಡಿದ ತೀರ್ಪು ಕಲಬುರಗಿ ಮಹಾನಗರ ಪಾಲಿಕೆ ಹಾಗೂ ಬೀದರ್ ನಗರ ಸಭೆಗೂ ಅನ್ವಯವಾಗಲಿದೆ. ಹಾಗಾಗಿ, ಇವುಗಳ ವಾರ್ಡ್ ಮರುವಿಂಗಡಣೆ, ಮೀಸಲಾತಿ ಕುರಿತ ಪ್ರಕ್ರಿಯೆ ತ್ವರಿತಗೊಳಿಸಲು ಸರ್ಕಾರಕ್ಕೆ ನಿರ್ದೇಶನ ನೀಡಬೇಕೆಂದು ಕೋರಿದರು.

ಆಗ, ಕಲಬುರಗಿ ಮಹಾನಗರ ಪಾಲಿಕೆ ಮತ್ತು ಬೀದರ್ ನಗರಸಭೆ ಅಲ್ಲದೇ ಅವಧಿ ಮುಗಿದು ವಿವಿಧ ಕಾರಣಗಳಿಂದಾಗಿ ಅನೇಕ ನಗರ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆದಿಲ್ಲ. ಕಾಲಮಿತಿಯೊಳಗೆ ಚುನಾವಣೆ ನಡೆಸುವುದು ಸಾಂವಿಧಾನಿಕ ಬಾಧ್ಯತೆಯಾಗಿದೆ. ಆದ್ದರಿಂದ ಅವಧಿ ಮುಗಿದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಿಗೆ ಕಾಲಮಿತಿಯೊಳಗೆ ಚುನಾವಣೆ ನಡೆಸಲು ಸರ್ಕಾರ ಮತ್ತು ಚುನಾವಣಾ ಆಯೋಗಕ್ಕೆ ನ್ಯಾಯಾಲಯವೇ ಸೂಕ್ತ ನಿರ್ದೇಶನ ನೀಡಬೇಕಿದೆ. ಹಾಗಾಗಿ, ಸ್ವಯಂಪ್ರೇರಿತ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಸಲ್ಲಿಸುವಂತೆ ರಿಜಿಸ್ಟ್ರಾರ್ ಜನರಲ್‌ಗೆ ಮುಖ್ಯ ನ್ಯಾಯಮೂರ್ತಿಗಳು ನಿರ್ದೇಶಿಸಿದರು.

## 23 ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ಬಾಕಿ

2019ರ ಮಾರ್ಚ್‌ನಲ್ಲಿ ಅವಧಿ ಮುಗಿದು, ವಾರ್ಡ್ ಮರುವಿಂಗಡಣೆ ಮತ್ತು ವಾರ್ಡ್ ಮೀಸಲಾತಿ ವಿಚಾರವಾಗಿ ಹೈಕೋರ್ಟ್‌ನ ಬೆಂಗಳೂರು ಪ್ರಧಾನಪೀಠ, ಧಾರವಾಡ ಮತ್ತು ಕಲಬುರಗಿ ಪೀಠಗಳಲ್ಲಿ ಅರ್ಜಿಗಳು ಬಾಕಿ ಇರುವ ರಾಜ್ಯದ ವಿವಿಧ ಜಿಲ್ಲೆಗಳ 23 ನಗರ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆಯಬೇಕಿದೆ. ಅವುಗಳೆಂದರೆ, ದೊಡ್ಡಬಳ್ಳಾಪುರ ನಗರಸಭೆ, ವಿಜಯಪುರ ಪುರಸಭೆ, ಗುಡಿಬಂಡೆ ಪಟ್ಟಣ ಪಂಚಾಯಿತಿ, ರಾಮನಗರ ನಗರಸಭೆ, ಚನ್ನಪಟ್ಟಣ ನಗರಸಭೆ, ಭದ್ರಾ ವತಿ ನಗರಸಭೆ, ತೀರ್ಥಹಳ್ಳಿ ಪಟ್ಟಣ ಪಂಚಾಯಿತಿ. ಶಿರಾ ನಗರಸಭೆ, ಬೇಲೂರು ಪುರಸಭೆ, ಚಿಕ್ಕಮಗಳೂರು ನಗರಸಭೆ, ತರಿಕೇರೆ ಪುರಸಭೆ, ಮಡಿಕೇರಿ ನಗರಸಭೆ, ಬೆಳಗಾವಿ ಮಹಾನಗರ ಪಾಲಿಕೆ, ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆ. ಅಥಣಿ ಪುರಸಭೆ, ಅಣ್ಣಿಗೇರಿ ಪುರಸಭೆ, ಗದಗ-ಬೆಟಗೇರಿ ನಗರಸಭೆ, ಬಂಕಾಪುರ ಪುರಸಭೆ, ಬಳ್ಳಾರಿ ಮಹಾನಗರ ಪಾಲಿಕೆ, ಹೊಸಪೇಟೆ ನಗರಸಭೆ, ಕಲಬುರಗಿ ಮಹಾನಗರ ಪಾಲಿಕೆ, ವಿಜಯಪುರ ಮಹಾನಗರ ಪಾಲಿಕೆ, ಬೀದರ್ ನಗರಸಭೆ.